# ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ

(ಎರಡನೇ ಅಧಿವೇಶನ)

## ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 26ನೇ ನವೆಂಬರ್, 2013

(ಸಮಯ: ಬೆಳಗ್ಗೆ 11.00 ಗಂಟೆಗೆ)

-----

### 1. ಸಂತಾಪ ಸೂಚನೆ

### 2. ಪ್ರಶ್ನೋತ್ತರ

**ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೇ ಪಟ್ಟಿ**

**ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೇ ಪಟ್ಟಿ**

### 3. ವರದಿಗಳನ್ನೊಪ್ಪಿಸುವುದು

1. ಶ್ರೀಮತಿ ಶಕುಂತಲಾ ಟಿ. ಶೆಟ್ಟಿ (ಅಧ್ಯಕ್ಷರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ) ಅವರು 2013ನೇ ಸಾಲಿನ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಇಪ್ಪತ್ತಾರನೇ ವರದಿಯನ್ನು ಒಪ್ಪಿಸುವುದು.

2. ಶ್ರೀ ಬಿ.ಆರ್. ಯಾವಗಲ್ (ಅಧ್ಯಕ್ಷರು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ) ಅವರು 2013-14ನೇ ಸಾಲಿನ .ಸಮಿತಿಯ ಮಧ್ಯಂತರ ವರದಿಯನ್ನು ಒಪ್ಪಿಸುವುದು.

### 4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಜಗದೀಶ ಶೆಟ್ಟರ, ಕೆ.ಜಿ.ಬೋಪಯ್ಯ, ಬಸವರಾಜ್ ಬೊಮ್ಮಾಯಿ, ವಿಶ್ವೇಶ್ವರ ಹೆಗಡೆ ಕಾಗೇರಿ, ಲಕ್ಷ್ಮಣ ಸವದಿ, ಹಾಗೂ ಇತರರು ರಾಜ್ಯದಲ್ಲಿ ಕಬ್ಬು ಬೆಳೆಗೆ ಬೆಲೆ ನಿಗದಿಪಡಿಸಲು ಎಸ್‌ಎಪಿ (SAP) ಕಾನೂನು ರೀತ್ಯಾ ಸರ್ಕಾರವು ಕ್ರಮ ಕೈಗೊಳ್ಳದಿರುವ ಬಗ್ಗೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ.

**ಪು.ತಿ.ನೋ.,**

2. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಡಿ. ನಾಗರಾಜಯ್ಯ ಹೆಚ್.ಡಿ.ರೇವಣ್ಣ, ಹೆಚ್.ಕೆ. ಕುಮಾರಸ್ವಾಮಿ, ಕೆ.ಎಂ.ಶಿವಲಿಂಗೇಗೌಡ ಹಾಗೂ ಇತರರು ರಾಜ್ಯದಲ್ಲಿ ಕಬ್ಬು, ಭತ್ತ, ಜೋಳ, ದಾಳಿಂಬೆ ಮತ್ತು ದ್ರಾಕ್ಷಿ ಬೆಳೆಗಳಿಗೆ ಸರ್ಕಾರವು ವೈಜ್ಞಾನಿಕ ಬೆಲೆ ನಿಗದಿಪಡಿಸುವ ಬಗ್ಗೆ ಚರ್ಚೆ.

## 5. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಹೆಚ್.ಡಿ. ರೇವಣ್ಣ ಅವರು ಹೊಳೆನರಸೀಪುರ ತಾಲ್ಲೂಕಿನ ದುದ್ದ, ಪಡುವಲಹಿಪ್ಪೆ ಮತ್ತು ಹರದನಹಳ್ಳಿಗಳ ಸಮುದಾಯ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆಯಿಂದ ರೋಗಿಗಳಿಗೆ ತೊಂದರೆಯುಂಟಾಗುತ್ತಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

2. ಶ್ರೀ ಕೆ.ಜಿ.ಬೋಪಯ್ಯ ಅವರು ಕೊಡಗು ಜಿಲ್ಲೆ ಮಡಿಕೇರಿ ತಾಲ್ಲೂಕಿನ ಸಂಪಾಜೆ, ಚೆಂಬು, ಪೆರಾಜೆ ಮತ್ತು ಕರಿಕೆ ಗ್ರಾಮಪಂಚಾಯತಿ ವ್ಯಾಪ್ತಿಯಲ್ಲಿ ಅಡಿಕೆ ಬೆಳೆಗೆ ಕೊಳೆ ರೋಗ ಉಂಟಾಗಿ ಬೆಳೆಯು ನಾಶವಾಗಿರುವುದರಿಂದ ರೈತರು ಸಂಕಷ್ಟಕ್ಕೆ ಒಳಗಾಗಿರುವ ಬಗ್ಗೆ ಮಾನ್ಯ ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರ ಗಮನ ಸೆಳೆಯುವುದು.

3. ಶ್ರೀ ಎಂ.ಟಿ. ಕೃಷ್ಣಪ್ಪ ಅವರು 2012-13ನೇ ಸಾಲಿನ ಸುವರ್ಣ ಗ್ರಾಮ ಮತ್ತು ಸಿ.ಎಂ.ಜಿ.ಎಸ್‌ವೈ ಯೋಜನೆಗಳನ್ನು ಮುಂದುವರಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

**ಪಿ.ಓಂಪ್ರಕಾಶ**
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)